ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಮಂಗಳವಾರ, ದಿನಾಂಕ : 10 ನೇ ಮಾರ್ಚ್, 2020

ತುಮಕೂರು ನಗರದಲ್ಲಿ ಹೊಸ ವರ್ತುಲ ರಸ್ತೆ ನಿರ್ಮಾಣದ ಬಗ್ಗೆ

ಶ್ರೀ ಕಾಂತರಾಜ್ (ಬಿಎಂಎಲ್)(ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

506 (488) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ತುಮಕೂರು ಮಹಾನಗರವು ದಿನೇ ದಿನೇ ವಿಸ್ತಾರವಾಗಿ ಬೆಳಯುತ್ತಿರುವುದರಿಂದ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ ಮಾದರಿಯಲ್ಲಿ ಹೊರ ವರ್ತುಲ ರಸ್ತೆಯನ್ನು ನಿರ್ಮಾಣ ಮಾಡಲು ಸರ್ಕಾರ ಚಿಂತನೆ ನಡೆಸಿದೆಯೇ; (ವಿವರ ನೀಡುವುದು)

(ಆ) ಹಾಗಿದ್ದಲ್ಲಿ, ಸರ್ಕಾರ ಈ ಬಗ್ಗೆ ತೆಗೆದುಕೊಂಡಿರುವ ಕ್ರಮಗಳ ಬಗ್ಗೆ ವಿವರ ನೀಡುವುದು;

(ಇ) ಈಗಿರುವ ಹೊರ ವರ್ತುಲ ರಸ್ತೆಯನ್ನು ಹೊರತುಪಡಿಸಿ ತುಮಕೂರು ಮಹಾನಗರದೊಳಗೆ ರಾಷ್ಟ್ರೀಯ ಹೆದ್ದಾರಿ ವಾಹನಗಳು ಸಂಚರಿಸುತ್ತಿರುವ ಕಾರಣ ದಟ್ಟಣೆ ಹೆಚ್ಚಿರುವುದರಿಂದ ನಗರದ ಹೊರ ಭಾಗದಲ್ಲಿ ಕೊರಟಗೆರೆ-ಶಿರಾ-ಕುಣಿಗಲ್-ಗುಬ್ಬಿ ಮತ್ತು ದಾಬಸ್‌ಪೇಟ್ ಮಾರ್ಗದಲ್ಲಿ ರಿಂಗ್ ರಸ್ತೆ ನಿರ್ಮಿಸಲಾಗುವುದೇ; ಈ ಬಗ್ಗೆ ಸರ್ಕಾರ ಕೈಗೊಳ್ಳಲಿರುವ ಕ್ರಮಗಳೇನು ?